# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಎಂ.ಬಿ. ಲಕ್ಷ್ಮಿ, ಅಧ್ಯಕ್ಷರು, ಅಣ್ಣೇಶ್ವರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ಮತ್ತು 48(5) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಪತ್ರ ಸಂಖ್ಯೆ:ಬೆಂಗ್ರಾಜಿಪಂ/ಸಿ.6/ಸಿಸಿಎ-20/2017-18 ದಿನಾಂಕ:20-02-2018.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ:22-03-2018 ರ ಕಾರಣ ಕೇಳುವ ನೋಟೀಸ್.
3. ಶ್ರೀಮತಿ ಎಂ.ಬಿ. ಲಕ್ಷ್ಮೀ, ಅಧ್ಯಕ್ಷರು ಅಣ್ಣೇಶ್ವರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಇವರು ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:24-04-2018.
4. ವಿಚಾರಣಾ ತಿಳುವಳಿಕೆ ಪತ್ರ ದಿನಾಂಕ:09-11-2018.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಪತ್ರ ಸಂಖ್ಯೆ:ಬೆಂಗ್ರಾಜಿಪಂ/ಪಶಾ/ಸಿ.ಆರ್-03/ದೇ/2017-18 ದಿನಾಂಕ:05-02-2019.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ದೇವನಹಳ್ಳಿ ತಾಲ್ಲೂಕು, ಅಣ್ಣೇಶ್ವರ ಗ್ರಾಮ ಪಂಚಾಯತಿ ವಿರುದ್ಧ ಸಾರ್ವಜನಿಕರು ಹಾಗೂ ಚುನಾಯಿತ ಪ್ರತಿನಿಧಿಗಳಿಂದ ಬಂದ ದೂರಿನ ಆಧಾರದ ಮೇಲೆ ಮುಖ್ಯ ಲೆಕ್ಕಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿ ಇವರು ಸದರಿ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಕಡತಗಳನ್ನು ಪರಿಶೀಲಿಸಿ, ವರದಿ ನೀಡಿರುತ್ತಾರೆ. ವರದಿಯಲ್ಲಿ ದೇವನಹಳ್ಳಿ ತಾಲ್ಲೂಕು ಅಣ್ಣೇಶ್ವರ ಗ್ರಾಮ ಪಂಚಾಯತಿಯಲ್ಲಿ ದಿನಾಂಕ:18-10-2017 ರಿಂದ 27-07-2016 ರವರೆಗೆ ಶ್ರೀ ಎಂ.ಎ. ಜೇಮ್ಸ್ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಶ್ರೀ ರವೀಂದ್ರ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದು, ಸದರಿ ಅವಧಿಯಲ್ಲಿ ಶ್ರೀ ಎಂ.ಎ. ಜೇಮ್ಸ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರು ಇ-ಸ್ವತ್ತು ತಂತ್ರಾಂಶದಲ್ಲಿ ಕಾನೂನುಬಾಹಿರವಾಗಿ 564 ನಮೂನೆ-9 ಮತ್ತು ನಮೂನೆ 11ಎ ಹಾಗೂ ನಮೂನೆ-11ಬಿ ವಿತರಿಸಿರುವುದು. ಶ್ರೀ ವಿ.ಎಸ್. ರವೀಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರು ಇ-ಸ್ವತ್ತು ತಂತ್ರಾಂಶದಲ್ಲಿ ಕಾನೂನು ಬಾಹಿರವಾಗಿ 653 ನಮೂನೆ-9 ಮತ್ತು ನಮೂನೆ-11ಎ ಹಾಗೂ ನಮೂನೆ-11ಬಿ ವಿತರಿಸಿರುವುದು 1) M/S Lake Point Builders Pvt Ltd ಇವರು ನಿರ್ಮಾಣ ಮಾಡಿದ ಕಟ್ಟಡಕ್ಕೆ ಲೈಸೆನ್ಸ್ ನೀಡುವಾಗ ಸದರಿಯವರಿಂದ ಪಡೆದ ಕಾರ್ಮಿಕ ನಿಧಿಯನ್ನು ಕರ್ನಾಟಕ ಕಟ್ಟಡ ಮತ್ತು ಕಾರ್ಮಿಕರ ಕಲ್ಯಾಣ ಮಂಡಳಿಗೆ ಪಾವತಿಸದೇ ಇರುವುದು 2) ಗ್ರಾಮ ಪಂಚಾಯತಿಗೆ ಬಂದಂತಹ ಅರ್ಜಿಗಳನ್ನು ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಮಂಡಿಸದೇ ಸಕಾಲದಲ್ಲಿಯೂ ಸಹ ನಮೂದು ಮಾಡದೆ ಅಧಿಕಾರ ದುರುಪಯೋಗ ಮಾಡಿರುವುದು. 3) ಗ್ರಾಮ ಪಂಚಾಯತಿಯಲ್ಲಿ ನಿಗಧಿತ ಸಮಯದೊಳಗಾಗಿ ಸಭೆಗಳನ್ನು ನಡೆಸದಿರುವುದು 4) ಸರ್ಕಾರಕ್ಕೆ ಸಲ್ಲಿಸಬೇಕಾದ ತೆರಿಗೆಗಳನ್ನು ನಿಯಮಾನುಸಾರ ಪಾವತಿಸದೇ ಪಂಚಾಯತಿ ಕೆಲಸಗಳಿಗೆ ಬಳಸಿಕೊಂಡಿರುವುದು. 5. ಗ್ರಾಮ ಪಂಚಾಯತಿಯ ಸ್ಥಳೀಯ ಸಂಪನ್ಮೂಲದಲ್ಲಿ ಕಚ್ಚ ಮತ್ತು ಪಕ್ಕ ಮನೆಗಳ ಬಗ್ಗೆ ಕ್ರಿಯಾ ಯೋಜನೆಯನ್ನು ತಯಾರಿಸಿ, ಫಲಾನುಭವಿಗಳ ಪಟ್ಟಿಗೆ ಅನುಮೋದನೆ ಪಡೆಯದೇ ಹಾಗೂ ತಾಂತ್ರಿಕ ಅನುಮೋದನೆಯನ್ನು ಪಡೆಯದೇ ಕಚ್ಚ ಮತ್ತು ಪಕ್ಕ ಮನೆಗಳನ್ನು ಪಾವತಿಸಿರುವುದು 6) 13ನೇ ಹಣಕಾಸು ಯೋಜನೆಯಡಿ ಅಣ್ಣೇಶ್ವರ ಗ್ರಾಮ ಪಂಚಾಯತಿಗೆ 26 ಲಕ್ಷಗಳು ಬಿಡುಗಡೆಯಾಗಿದ್ದು ಮೂರು ವರ್ಷಗಳಿಂದ ಕ್ರಿಯಾ ಯೋಜನೆಗಳನ್ನು ತಯಾರಿಸದೇ ಕಾಮಗಾರಿ ಕೆಲಸಗಳು ಕುಂಠಿತವಾಗಿರುತ್ತದೆ. ಸದರಿ ಮೊತ್ತವನ್ನು ಸರ್ಕಾರಕ್ಕೆ ಹಿಂದಿರುಗಿಸಲು ಕ್ರಮ ವಹಿಸದೇ ಇರುವ ಆರೋಪಗಳ ಬಗ್ಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮ ವಹಿಸಿ, ಆರೋಪಗಳ ಬಗ್ಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮ ವಹಿಸಿ ಆರೋಪಗಳ ಬಗ್ಗೆ ವಿಚಾರಣೆ ನಡೆಸಲು ಜಂಟಿ ಇಲಾಖಾ ವಿಚಾರಣೆ ಪ್ರಾರಂಭಿಸಲಾಗಿದೆ.

ಮುಂದುವರೆದು, ಸದರಿ ಆರೋಪದಲ್ಲಿ ಭಾಗಿಯಾಗಿರುವುದಾಗಿ ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣದಿಂದ, ಶ್ರೀಮತಿ ಲಕ್ಷ್ಮಿ ಎಂ.ಬಿ. ಅಧ್ಯಕ್ಷರು, ಅಣ್ಣೇಶ್ವರ ಗ್ರಾಮ ಪಂಚಾಯತಿ ಇವರಿಗೆ ಕಾರಣ ಕೇಳುವ ನೋಟೀಸು ಜಾರಿಗೊಳಿಸಲಾಗಿದ್ದು, ಅಧ್ಯಕ್ಷರು, ಅಣ್ಣೇಶ್ವರ ಗ್ರಾಮ ಪಂಚಾಯತಿಯವರು ಸಮಜಾಯಿಷಿ ನೀಡಿರುತ್ತಾರೆ. ಸದರಿ ಸಮಜಾಯಿಷಿಯನ್ನು ಪರಿಶೀಲಿಸಿ ವರದಿ ನೀಡುವಂತೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ರವರಿಗೆ ಸೂಚಿಸಲಾಗಿದೆ. ಅದರಂತೆ ಪರಿಶೀಲಿಸಿ ವರದಿ ನೀಡಿರುತ್ತಾರೆ. ವರದಿಯಲ್ಲಿ ನಿಯಮಗಳನ್ನು ಪಾಲಿಸದೆ ಇರುವುದು ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಶ್ರೀಮತಿ ಲಕ್ಷ್ಮಿ ಎಂ.ಬಿ. ಅಧ್ಯಕ್ಷರು, ಅಣ್ಣೇಶ್ವರ ಗ್ರಾಮ ಪಂಚಾಯತಿ ಇವರ ವಿರುದ್ಧ ಸರ್ಕಾರದ ಹಂತದಲ್ಲಿ ಸೂಕ್ತ ಕ್ರಮ ಕೈಗೊಳ್ಳಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀಮತಿ ಎಂ.ಬಿ. ಲಕ್ಷ್ಮಿ, ಅಧ್ಯಕ್ಷರು, ಅಣ್ಣೇಶ್ವರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರಿಗೆ ದಿನಾಂಕ:22-03-2018 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆ ನೀಡಿ ಇ-ಸ್ವತ್ತು ತಂತ್ರಾಂಶದಲ್ಲಿ ಎಂ.ಎ. ಜೇಮ್ಸ್ ರವರು ಹಾಗೂ ಶ್ರೀ ಎಸ್.ವಿ. ರವೀಂದ್ರ ರವರು ಮಾಡಿರುವ ಇ-ಖಾತೆಗಳು ಭೂ ಪರಿವರ್ತನೆಯಾಗಿರುವ ಹಾಗೂ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರಾಧಿಕಾರದಿಂದ ಅನುಮೋದನೆಗೊಂಡಿರುವ ಹಾಗೂ ಕ್ರಮಬದ್ಧವಾಗಿರುವ ಖಾತೆಗಳನ್ನು ಗ್ರಾಮ ಪಂಚಾಯತಿ ಸಭೆಯಲ್ಲಿ ಮಂಡಿಸಿ ಸರ್ವಾನುಮತದಿಂದ ತೀರ್ಮಾನಿಸಲಾಗಿರುತ್ತದೆ ಹಾಗೂ ಇ-ಖಾತಾಗಳನ್ನು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲಿಸಿ ಅನುಮೋದನೆ ನೀಡಿರುತ್ತಾರೆ. ಅದರಂತೆ ಖಾತೆಗಳನ್ನು ವಿತರಿಸಿರುತ್ತಾರೆ, ಗ್ರಾಮ ಪಂಚಾಯತಿಯಿಂದ ಕಾರ್ಮಿಕ ಕಲ್ಯಾಣ ನಿಧಿಗೆ ಪಾವತಿಸಲಾಗಿರುತ್ತದೆ. ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಮಂಡಿಸದೆ ಯಾವುದೇ ಲೈಸೆನ್ಸ್ ಹಾಗೂ ನಿರಾಕ್ಷೇಪಣಾ ಪತ್ರಗಳನ್ನು ನೀಡಿರುವುದಿಲ್ಲ. ತನ್ನ ಅವಧಿಯ 28 ತಿಂಗಳುಗಳಲ್ಲಿ 21 ಸಾಮಾನ್ಯ ಸಭೆಯನ್ನು ನಡೆಸಿರುತ್ತೇನೆ, ಕಚ್ಚಾ ಮನೆ ಮತ್ತು ಪಕ್ಕಾ ಮನೆಗಳ ಫಲಾನುಭವಿಗಳ ಪಟ್ಟಿಯನ್ನು ದಿನಾಂಕ:13-06-2016 ರಂದು ನಡೆದ ಸಾಮಾನ್ಯ ಸಭೆಯಲ್ಲಿ ಮಂಡಿಸಿ ಚರ್ಚಿಸಿ ಸರ್ವಾನುಮತದಿಂದ ತೀರ್ಮಾನಿಸಿ ಕ್ರಿಯಾ ಯೋಜನೆಯನ್ನು ತಯಾರಿಸಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸಿ ಅನುಮೋದನೆ ಪಡೆದು ಹಣ ಪಾವತಿಸಲಾಗಿರುತ್ತದೆ. ಗ್ರಾಮ ಪಂಚಾಯತಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ದಿನಾಂಕ:06-07-2015 ರಿಂದ ಇದುವರೆವಿಗೂ ಉತ್ತಮ ರೀತಿಯಲ್ಲಿ ಆಡಳಿತ ನಡೆಸಿಕೊಂಡು ಹೋಗುತ್ತಿದ್ದು, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆ ಇಲ್ಲದೆ ಹಾಗೂ ಸಾಮಾನ್ಯ ಸಭೆಯಲ್ಲಿ ಮಂಡಿಸದೆ ಯಾವುದೇ ಕೆಲಸಕಾರ್ಯಗಳನ್ನು ನಿರ್ವಹಿಸಿರುವುದಿಲ್ಲ. ಆದ್ದರಿಂದ ಈ ಆರೋಪ ಮಾಡಿರುವ ಕಾರಣ ಕೇಳುವ ನೋಟೀಸನ್ನು ಕೈಬಿಡಬೇಕಾಗಿ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀಮತಿ ಎಂ.ಬಿ. ಲಕ್ಷ್ಮಿ, ಅಧ್ಯಕ್ಷರು, ಅಣ್ಣೇಶ್ವರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ನೀಡಲಾಗಿದ್ದು, ಸದರಿಯವರು ದಿನಾಂಕ:13-11-2018 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಗೆ ಹಾಜರಾಗಿರುತ್ತಾರೆ.

ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ನ್ಯಾಯಾಲಯದಲ್ಲಿ ಪರಿಶೀಲಿಸಲಾಗಿದ್ದು, ಶ್ರೀಮತಿ ಎಂ.ಬಿ. ಲಕ್ಷ್ಮಿ, ಅಧ್ಯಕ್ಷರು, ಅಣ್ಣೇಶ್ವರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಗ್ರಾಮ ಪಂಚಾಯತಿ ಸಭೆಗಳನ್ನು ನಿಯಮಾನುಸಾರ ನಡೆಸಲಾಗಿದೆ. ಕೆಲವೊಮ್ಮೆ ಚುನಾವಣಾ ನೀತಿ ಸಂಹಿತೆ ಜಾರಿ ಇದ್ದ ಕಾರಣ ಸಭೆ ಕರೆಯಲು ಸಾಧ್ಯವಾಗದಿರುವುದು ಆದರೆ ಉದ್ದೇಶಪೂರ್ವಕವಾಗಿ ಸಭೆಗಳನ್ನು ನಡೆಸುವಲ್ಲಿ ಯಾವುದೇ ಲೋಪವಾಗಿರುವುದಿಲ್ಲ. ಖಾತೆ ಮಾಡುವಲ್ಲಿ ಯಾವುದೇ ರೀತಿಯ ಅವ್ಯವಹಾರವಾಗಿರುವುದಿಲ್ಲ. ಗ್ರಾಮ ಪಂಚಾಯತಿಗೆ 14ನೇ ಹಣಕಾಸು ಅನುದಾನ ಬಂದಿದ್ದರಿಂದ 13ನೇ ಹಣಕಾಸು ಅನುದಾನ ರೂ.16,50,000/- ಗಳನ್ನು ಬಳಕೆ ಮಾಡದೆ ಸರ್ಕಾರಕ್ಕೆ ಹಿಂದಿರುಗಿಸಲಾಗಿದೆ. ಕಾರ್ಮಿಕ ನಿಧಿ ಮತ್ತು ಸರ್ಕಾರಕ್ಕೆ ಪಾವತಿ ಮಾಡಬೇಕಾಗಿರುವ ತೆರಿಗೆಗಳನ್ನು ನಿಯಮಾನುಸಾರ ಪಾವತಿ ಮಾಡಲಾಗಿದೆ ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಇವರ ಪತ್ರದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ದೇವನಹಳ್ಳಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿರವರು ವಿಚಾರಣೆಗೆ ಹಾಜರಾದ ಸಂದರ್ಭದಲ್ಲಿ ಮೌಖಿಕವಾಗಿ ಸೂಚಿಸಿರುವ ಮೇರೆಗೆ ಅಣ್ಣೇಶ್ವರ ಗ್ರಾಮ ಪಂಚಾಯಿತಿ ಅಧ್ಯಕ್ಷರ ವಿರುದ್ಧ ಆರೋಪಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಆರೋಪಗಳ ವರದಿಯನ್ನು ಸಲ್ಲಿಸಿರುತ್ತಾರೆ.

1. 2015-16 ಹಾಗೂ 2016-17ನೇ ಸಾಲಿನಲ್ಲಿ ಒಟ್ಟು 148 ಫಲಾನುಭವಿಗಳಿಗೆ ಕಚ್ಚಾ ಮನೆಗಳ ನಿರ್ಮಾಣಕ್ಕೆ ಹಣ ಸಂದಾಯವಾಗಿರುತ್ತದೆ. ಇದರಲ್ಲಿ ಒಟ್ಟು 36 ಫಲಾನುಭವಿಗಳು ಇತರೆ ವರ್ಗ ಹಾಗೂ 112 ಫಲಾನುಭವಿಗಳು ಪ.ಜಾತಿ/ಪ.ಪಂಗಡ ವರ್ಗಕ್ಕೆ ಸೇರಿದವರಾಗಿರುತ್ತಾರೆ. ಇದಕ್ಕೆ ಸಂಬಂಧಪಟ್ಟಂತೆ 2016-17ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಶೇ.25% ರಡಿ ಒಟ್ಟು ರೂ.40.00 ಲಕ್ಷಗಳು ಹಾಗೂ ಇತರೆ ಕಾಮಗಾರಿಗಳ ವರ್ಗದಡಿ ರೂ.11.00 ಲಕ್ಷಗಳನ್ನು ಮೀಸಲಿರಿಸಿ ಅನುಮೋನೆಯನ್ನು ಪಡೆದುಕೊಂಡಿರುತ್ತಾರೆ. ಆದರೆ ಫಲಾನುಭವಿಗಳ ಪಟ್ಟಿಗೆ ಅನುಮೋದನೆ ಪಡೆದುಕೊಂಡಿರುವುದಿಲ್ಲ. ಸದರಿ 148 ಫಲಾನುಭವಿಗಳಲ್ಲಿ 116 ಫಲಾನುಭವಿಗಳಿಗೆ ತಲಾ ರೂ.25,000 ಗಳಂತೆ ಒಟ್ಟು ರೂ.29.00 ಲಕ್ಷಗಳು ಹಾಗೂ 32 ಫಲಾನುಭವಿಗಳಿಗೆ ತಲಾ ರೂ.50,000 ಗಳಂತೆ ಒಟ್ಟು ರೂ.16.00 ಲಕ್ಷಗಳು ಸೇರಿ ಒಟ್ಟು ರೂ.45.00 ಲಕ್ಷಗಳನ್ನು ಪಾವತಿಸಿರುತ್ತಾರೆ.

2. ದಿನಾಂಕ:10.03.2016 ರಂದು ನಡೆದ ಸಾಮಾನ್ಯ ಸಭೆಯಲ್ಲಿ 62 ಫಲಾನುಭವಿಗಳು, ದಿನಾಂಕ:20.05.2016 ರಂದು ನಡೆದ ಸಭೆಯಲ್ಲಿ 55 ಫಲಾನುಭವಿಗಳು ಹಾಗೂ ದಿನಾಂಕ:13.06.2016 ರಂದು ನಡೆದ ಸಭೆಯಲ್ಲಿ 9 ಫಲಾನುಭವಿಗಳನ್ನು ಸೇರಿ ಒಟ್ಟು 126 ಕಚ್ಚಾ ಮನೆಗಳ ಫಲಾನುಭವಿಗಳನ್ನು ಆಯ್ಕೆ ಮಾಡಿದ್ದು, ಸದರಿ ಫಲಾನುಭವಿಗಳ ಪಟ್ಟಿಯನ್ನು ತಾಲ್ಲೂಕು ಪಂಚಾಯಿತಿ ವತಿಯಿಂದ ಅನುಮೋದನೆ ಪಡೆದಿರುವುದಿಲ್ಲ ಎಂದು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ದೇವನಹಳ್ಳಿ ತಾಲ್ಲೂಕುರವರು ವರದಿಯಲ್ಲಿ ತಿಳಿಸಿರುತ್ತಾರೆ.

3. ಕೇವಲ ಹಣ ಸಂದಾಯ ರಸೀದಿಯನ್ನು ಪಡೆದು ಎಲ್ಲಾ ಫಲಾನುಭವಿಗಳಿಗೆ ಸಮನಾಂತರವಾಗಿ ರೂ.25,000 ಅಥವಾ ರೂ.50,000 ಗಳನ್ನು ಪಾವತಿಸಿದ್ದು, ನಿಯಮಾನುಸಾರ ಕಾಮಗಾರಿಗಳ ಅಂದಾಜುಪಟ್ಟಿಯನ್ನು ತಯಾರಿಸಿ ಹಾಗೂ ಅಳತೆ ಮಸ್ತಕದಲ್ಲಿ ದಾಖಲಿಸಿ ಕಾಮಗಾರಿ ಬಿಲ್ಲ ಮುಖಾಂತರ ಹಣ ಪಾವತಿಸಿರುವುದಿಲ್ಲ. ಇದು ಸ್ಪಷ್ಟ ನಿಯಮ ಉಲ್ಲಂಘನೆ ಹಾಗೂ ಹಣ ದುರುಪಯೋಗವಾಗಿರುತ್ತದೆ ಎಂದು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ದೇವನಹಳ್ಳಿ ತಾಲ್ಲೂಕುರವರು ವರದಿಯಲ್ಲಿ ತಿಳಿಸಿರುತ್ತಾರೆ.

4. ಸಾಮಾನ್ಯ ವರ್ಗದ 36 ಫಲಾನುಭವಿಗಳಿಗೆ ಒಟ್ಟು ರೂ.10.75 ಲಕ್ಷಗಳನ್ನು ಪಾವತಿಸಿದ್ದು, ಅದರಲ್ಲಿ 7 ಫಲಾನುಭವಿಗಳಿಗೆ ತಲಾ ರೂ.50,000 ಗಳು ಹಾಗೂ 29 ಫಲಾನುಭವಿಗಳಿಗೆ ತಲಾ ರೂ.25,000 ಗಳನ್ನು ಪಾವತಿಸಿದ್ದು, ಇದು ನಿಯಮ ಬಾಹಿರವಾಗಿದ್ದು, ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಕಚ್ಚಾ ನಿಯಮ ಉಲ್ಲಂಘನೆ ಹಾಗೂ ಹಣ ದುರುಪಯೋಗವಾಗಿರುತ್ತದೆ ಎಂದು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ದೇವನಹಳ್ಳಿ ತಾಲ್ಲೂಕುರವರು ವರದಿಯಲ್ಲಿ ತಿಳಿಸಿರುತ್ತಾರೆ.

5. ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಠ ಪಂಗಡ ವರ್ಗದವರು ನಿರ್ಮಿಸಿಕೊಂಡು ಹಾಗೂ ವಿವಿಧ ಯೋಜನೆಗಳಡಿ ನಿರ್ಮಿಸಿದ ವಸತಿಗಳ ದುರಸ್ಥಿಗಾಗಿ ಗರಿಷ್ಠ ರೂ.15,000ಗಳನ್ನು ಮಾತ್ರ ನಿಯಮಾನುಸಾರ ಸಹಾಯಧನ ನೀಡಬಹುದಾಗಿದ್ದು, ಆದರೆ ಪ್ರತಿ ಫಲಾನುಭವಿಗಳಿಗೆ ರೂ.25,000 ಅಥವಾ ರೂ.50,000 ಗಳನ್ನು ನೀಡಿರುವುದು ನಿಯಮಬಾಹಿರವಾಗಿದ್ದು ಹಾಗೂ ಸ್ಪಷ್ಟವಾಗಿ ಕಾನೂನು ಉಲ್ಲಂಘನೆ ಮಾಡಿ ಹಣ ದುರುಪಯೋಗವಾಗಿರುತ್ತದೆ ಎಂದು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ದೇವನಹಳ್ಳಿ ತಾಲ್ಲೂಕುರವರು ವರದಿಯಲ್ಲಿ ತಿಳಿಸಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿದಾಗ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಇವರ ಪತ್ರ ಮತ್ತು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ದೇವನಹಳ್ಳಿ ಇವರ ವರದಿಯ ಅನುಸಾರ ಶ್ರೀಮತಿ ಎಂ.ಬಿ. ಲಕ್ಷ್ಮಿ, ಅಧ್ಯಕ್ಷರು, ಅಣ್ಣೇಶ್ವರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಕರ್ತವ್ಯಲೋಪವೆಸಗಿರುವುದು, ಸ್ಪಷ್ಟ ನಿಯಮ ಉಲ್ಲಂಘನೆ ಮತ್ತು ಹಣದುರುಪಯೋಗವಾಗಿರುವುದು ಕಂಡು ಬಂದಿರುವುದರಿಂದ ಸದರಿಯವರನ್ನು ಕರ್ನಾಟಕ ಕರ್ನಾಟಕ ಗ್ರಾಮ ಸ್ವರಾಜ್ ಮತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ರನ್ವಯ ಅಣ್ಣೇಶ್ವರ ಗ್ರಾಮ ಪಂಚಾಯತಿ ಅಧ್ಯಕ್ಷ ಸ್ಥಾನದಿಂದ ಮತ್ತು ಪ್ರಕರಣ 48(5) ರನ್ವಯ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/256/ಗ್ರಾಪಂಅ/2018**
**ಬೆಂಗಳೂರು, ದಿನಾಂಕ:03-03-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಎಂ.ಬಿ. ಲಕ್ಷ್ಮಿ, ಅಧ್ಯಕ್ಷರು, ಅಣ್ಣೇಶ್ವರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಕರ್ತವ್ಯಲೋಪವೆಸಗಿರುವುದು, ಸ್ಪಷ್ಟ ನಿಯಮ ಉಲ್ಲಂಘನೆ ಮತ್ತು ಹಣದುರುಪಯೋಗವಾಗಿರುವುದು ಕಂಡು ಬಂದಿರುವುದರಿಂದ ಸದರಿಯವರನ್ನು ಕರ್ನಾಟಕ ಕರ್ನಾಟಕ ಗ್ರಾಮ ಸ್ವರಾಜ್ ಮತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ರನ್ವಯ ಅಣ್ಣೇಶ್ವರ ಗ್ರಾಮ ಪಂಚಾಯತಿ ಅಧ್ಯಕ್ಷ ಸ್ಥಾನದಿಂದ ಮತ್ತು ಪ್ರಕರಣ 48(5) ರನ್ವಯ ಸದಸ್ಯತ್ವದಿಂದ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 3/3/2020
(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ, (ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3/3/2020

ಗೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ,
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
3) ಶ್ರೀಮತಿ ಎಂ.ಬಿ. ಲಕ್ಷ್ಮಿ, ಅಧ್ಯಕ್ಷರು, ಅಣ್ಣೇಶ್ವರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅಣ್ಣೇಶ್ವರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.
6) ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.